ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ.89/2023

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಅಫ್ರಿದಿ** | | |
| **ತಂದೆಃಹೆಸರು** | **ಮೋದಿನ್ ಸಾಭ್** | **ಪಿಡಬ್ಲೂ:** | **6** |
| **ವಯಸ್ಸು** | **28 ವರ್ಷ** | **ಸಿಡಬ್ಲೂ:** | **6** |
| **ಉದ್ಯೋಗಃ** | **ಬಂಗಾರದ ಅಂಗಡಿ ಕೆಲಸ** | | |
| **ವಾಸ ಸ್ಥಳಃ** | **ಸಿಂಧನೂರು.** | | |

**ದಿನಾಂಕ 23-04-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

**ಈ ದಿನ ಆರೋಪಿ ವಿದ್ಯುನ್ಮಾನ ಯಂತ್ರ, ಗೂಗಲ್ ಮೀಟ್ ID No. qkz-cdpn-dgk ಮುಖಾಂತರ ಹಾಜರಾಗಿದ್ದು, ಅವರ ಸಮಕ್ಷಮ ಈ ಕೆಳಕಂಡಂತೆ ಸಾಕ್ಷಿ ವಿಚಾರಣೆ ಮಾಡಲಾಯಿತು.**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೋಲೀಸರು ಪೋ.ಠಾ. ಗೆ ಕರೆದಾಗ ನಿಪಿ-4 ರಿಂದ 7 ಆಭರಣಗಳನ್ನು ತೂಕ ಮಾಡಿ, ಆಗ ಅದರ ತೂಕದ ಬಗ್ಗೆ ಹೇಳಿದ್ದೆ, ಆದರೆ ಈಗ ನೆನಪಿಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ. ನಾನು ಆರೋಪಿಯನ್ನು ನೋಡಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ**

ದಿ.13-10-2022 ರಂದು ಬೆ.9-30 ರಿಂದ 10-30 ರವರೆಗೆ ಈ ಪ್ರಕರಣಕ್ಕೆ ಸಂಬಂಧಿಸಿದ ನಿಪಿ-4 ರಿಂದ 7 ರಲ್ಲಿ ತೋರಿಸಿದ ಆಭರಣಗಳನ್ನು ಆರೋಪಿ ಹಾಜರುಪಡಿಸಿದ್ದು, ಅವುಗಳನ್ನು ನಿಪಿ-13 ರಂತೆ ಪಂಚನಾಮೆಯ ಕಾಲಕ್ಕೆ ನೀವು ಹಾಜರಿದ್ದು, ಪಂಚನಾಮೆಯ ಬಗ್ಗೆ ತಿಳಿದು & ಆರೋಪಿಯಿಂದ ನಿಪಿ-4 ರಿಂದ 7 ರಲ್ಲಿನ ಬಂಗಾರದ ಆಭರಣಗಳನ್ನು ಜಪ್ತಿ ಮಾಡಿಕೊಂಡ ಬಗ್ಗೆ ನಿಪಿ-12 ಜಪ್ತಿ ಪಂಚನಾಮೆ ಮಾಡಿದ್ದರು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ-25 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಿಂಧನೂರು.